R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ



| ಭಾಗ– IV<br>Part– IV | ಬೆಂಗಳೂರು, ಸೋಮವಾರ, 27, ಏಪ್ರಿಲ್, 2020 (ವೈಶಾಖ 07, ಶಕವರ್ಷ 1942)<br>Bengaluru, MONDAY, 27, APRIL, 2020 (Vaishakha 07, ShakaVarsha 1942) | ನಂ. 148<br>No. 148 |
|---|---|---|



ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ

ಅಧಿಸೂಚನೆ

**ಸಂಖ್ಯೆ: ಸಂವ್ಯಶಾಇ 34 ಶಾಸನ 2017, ಬೆಂಗಳೂರು, ದಿನಾಂಕ: 27.04.2020**

ಭಾರತ ರಾಷ್ಟ್ರೀಯ ಕಾನೂನು ವಿದ್ಯಾಲಯ (ತಿದ್ದುಪಡಿ) ವಿಧೇಯಕ, 2020ಕ್ಕೆ ಏಪ್ರಿಲ್ ತಿಂಗಳ 27ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2020ರ ಕರ್ನಾಟಕ ಅಧಿನಿಯಮ ಸಂಖ್ಯೆ: 13 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2020 ರ ಕರ್ನಾಟಕ ಅಧಿನಿಯಮ ಸಂಖ್ಯೆ: 13**

(2020 ರ ಏಪ್ರಿಲ್ ತಿಂಗಳ 27 ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಭಾರತ ರಾಷ್ಟ್ರೀಯ ಕಾನೂನು ವಿದ್ಯಾಲಯ (ತಿದ್ದುಪಡಿ) ಅಧಿನಿಯಮ, 2020**

(2020ರ ಏಪ್ರಿಲ್ ತಿಂಗಳ 27 ನೇ ದಿನಾಂಕದಂದು ರಾಜ್ಯಪಾಲರಿಂದ ಒಪ್ಪಿಗೆಯನ್ನು ಪಡೆಯಲಾಗಿದೆ)

ಭಾರತ ರಾಷ್ಟ್ರೀಯ ಕಾನೂನು ವಿದ್ಯಾಲಯ ಅಧಿನಿಯಮ, 1986 ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿಇನ್ನು ಮುಂದೆ ಕಂಡು ಬರುವ ಉದ್ದೇಶಗಳಿಗಾಗಿ ಭಾರತ ರಾಷ್ಟ್ರೀಯ ಕಾನೂನು ವಿದ್ಯಾಲಯ ಅಧಿನಿಯಮ, 1986ನ್ನು (1986ರ ಕರ್ನಾಟಕ ಅಧಿನಿಯಮ 22) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತೊಂದನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗತಕ್ಕದ್ದು:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಭಾರತ ರಾಷ್ಟ್ರೀಯ ಕಾನೂನು ವಿದ್ಯಾಲಯ (ತಿದ್ದುಪಡಿ) ಅಧಿನಿಯಮ, 2020 ಎಂದುಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. 4ನೇ ಪ್ರಕರಣದ ತಿದ್ದುಪಡಿ.-** ಭಾರತ ರಾಷ್ಟ್ರೀಯ ಕಾನೂನು ವಿದ್ಯಾಲಯ ಅಧಿನಿಯಮ, 1986ರ (1986ರ ಕರ್ನಾಟಕ ಅಧಿನಿಯಮ 22) 4 ನೇ ಪ್ರಕರಣದ (2)ನೇ ಉಪಪ್ರಕರಣದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"(3) ಈ ಅಧಿನಿಯಮ ಮತ್ತು ಅದರ ಅಡಿಯಲ್ಲಿ ಮಾಡಿದ ವಿನಿಯಮಗಳಲ್ಲಿ ಏನೇ ಒಳಗೊಂಡಿದ್ದರೂ, ವಿದ್ಯಾಲಯವು ಕರ್ನಾಟಕದ ವಿದ್ಯಾರ್ಥಿಗಳಿಗೆ ಶೇಕಡ ಇಪ್ಪತ್ತೈದು ಸೀಟುಗಳನ್ನು ಸಮತಲವಾಗಿ ಮೀಸಲಿರಿಸತಕ್ಕದ್ದು.

**ವಿವರಣೆ:** ಈ ಪ್ರಕರಣದ ಉದ್ದೇಶಕ್ಕಾಗಿ 'ಕರ್ನಾಟಕದ ವಿದ್ಯಾರ್ಥಿ' ಎಂದರೆ, ಅರ್ಹತಾ ಪರೀಕ್ಷೆಗೆ ಹಿಂದಿನ ಹತ್ತು ವರ್ಷಗಳಿಗೆ ಕಡಿಮೆಯಲ್ಲದ ಅವಧಿಗಾಗಿ ರಾಜ್ಯದಲ್ಲಿನ ಯಾವುದಾದರೂ ಒಂದು ಮಾನ್ಯತೆ ಪಡೆದ ಶೈಕ್ಷಣಿಕ ಸಂಸ್ಥೆಗಳಲ್ಲಿ ವಿದ್ಯಾಭ್ಯಾಸ ಮಾಡಿರುವ ಒಬ್ಬ ವಿದ್ಯಾರ್ಥಿ."

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಕೆ. ದ್ವಾರಕನಾಥ್ ಬಾಬು)**
ಸರ್ಕಾರದ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.

## PARLIAMENTARY AFFAIRS AND LEGISLATION SECRETARIAT
## NOTIFICATION
## NO. SAMVYASHAE 34 SHASANA 2017, Bangalore, dated: 27.04.2020

Ordered that the translation of ಭಾರತ ರಾಷ್ಟ್ರೀಯ ಕಾನೂನು ವಿದ್ಯಾಲಯ (ತಿದ್ದುಪಡಿ) ಅಧಿನಿಯಮ, 2020 (2020ರ ಕರ್ನಾಟಕ ಅಧಿನಿಯಮ ಸಂಖ್ಯೆ: 13) in the English language, be published as authorised by the Governor of Karnataka under clause (3) of Article 348 of the constitution of India in the Karnataka Gazette for general information.

The following translation of ಭಾರತ ರಾಷ್ಟ್ರೀಯ ಕಾನೂನು ವಿದ್ಯಾಲಯ (ತಿದ್ದುಪಡಿ) ಅಧಿನಿಯಮ, 2020 (2020ರ ಕರ್ನಾಟಕ ಅಧಿನಿಯಮ ಸಂಖ್ಯೆ: 13) in the English language is published in the Official Gazette under the authority of the Governor of Karnataka under clause (3) of Article 348 of the Constitution of India shall be deemed to be the authoritative text thereof in English language.

## KARNATAKA ACT NO. 13 OF 2020

(First Published in the Karnataka Gazette Extra-ordinary on the 27th Day of April, 2020)

## THE NATIONAL LAW SCHOOL OF INDIA (AMENDMENT) ACT, 2020

(Received the assent of Governor on the 27th day of April, 2020)

An Act further to amend the National Law School of India Act, 1986.

Whereas, it is expedient to amend the National Law School of India Act, 1986 (Karnataka Act 22 of 1986) for the purposes hereinafter appearing;

Be it enacted by the Karnataka State Legislature in the Seventy First year of the Republic of India as follows.-

**1. Short title and commencement.-** (1) This Act may be called the National Law School of India (Amendment) Act, 2020.

(2) It shall come into force at once.

**2. Amendment of section 4.-**In section 4 of the National Law School of India Act, 1986 (Karnataka Act 22 of 1986) after sub-section (2), the following shall be inserted, namely:-

"(3) Notwithstanding anything contained in this Act and the regulations made thereunder, the school shall reserve horizontally twenty five percent of seats for students of Karnataka.

**Explanation:** For the purpose of this section "student of Karnataka" means a student who has studied in any one of the recognized educational institutions in the State for a period of not less than ten years preceding to the qualifying examination."

By Order and in the name of
the Governor of Karnataka,

**(K. DWARAKNATH BABU)**
Secretary to Government
Department of Parliamentary Affairs
and Legislation

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

SUNIL GARDE
Digitally signed by SUNIL GARDE
Date: 2020.04.28 12:57:36 +05'30'